ಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣ

1913 (2344) ಶ್ರೀ ಅಶೋಕ್ ಆರ್. (ಉತ್ತರಹಳ್ಳಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಉತ್ತರಹಳ್ಳಿ ಕ್ಷೇತ್ರಕ್ಕೆ ಸಂಬಂಧಪಟ್ಟಂತೆ ಯಾವ ಯಾವ ಶಾಲೆಗಳಿಗೆ ಸರ್ಕಾರದ ಮಾದರಿ ಶಾಲೆಗಳೆಂದು ಪರಿಗಣಿಸಿರುತ್ತೀರಾ;

ಆ) ಈ ಶಾಲೆಗಳಿಗೆ ಸರ್ಕಾರದಿಂದ ಲಭಿಸುತ್ತಿರುವ ಅನುದಾನವು ಸರಿಯಾದ ಸಮಯಕ್ಕೆ ತಲುಪುತ್ತಿದೆಯೆ;

ಇ) ಯಾವ ಯಾವ ಶಾಲೆಗಳಿಗೆ ಪ್ರೌಢಶಿಕ್ಷಣ ಮತ್ತು ಪ್ರಾಥಮಿಕ ಶಾಲೆಗಳಿಗೆ ಅನುದಾನವನ್ನು ಶಿಕ್ಷಣದಲ್ಲಿ ಕಂಪ್ಯೂಟರ್ ಶಿಕ್ಷಣಕ್ಕಾಗಿ ಅನುದಾನವನ್ನು ಮಂಜೂರಾತಿ ನೀಡಲಾಗಿದೆ;

ಈ) ಕಂಪ್ಯೂಟರ್ ಶಿಕ್ಷಣಕ್ಕಾಗಿಯೇ ಸರ್ಕಾರಿ ಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಕರನ್ನು ನೇಮಿಸಲಾಗಿದೆಯೇ?

ಹಾಗಿದ್ದಲ್ಲಿ ಎಷ್ಟ ಜನ ಶಿಕ್ಷಕರನ್ನು ನೇಮಿಸಲಾಗಿದೆ.

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ ಸಾಣೆ ಗುರುವನ ಹಳ್ಳಿ.

ಆ) ಸರ್ಕಾರಿ ಶಾಲೆಗಳಿಗೆ ನೇರವಾಗಿ ಅನುದಾನವನ್ನು ಬಿಡುಗಡೆ ಮಾಡುತ್ತಿರುವುದಿಲ್ಲ.

ಇ) ಸರ್ಕಾರಿ ಪ್ರಾಥಮಿಕ ಶಾಲಾ ಮಟ್ಟದಲ್ಲಿ ಕಂಪ್ಯೂಟರ್ ಶಿಕ್ಷಣವನ್ನು ನೀಡುತ್ತಿಲ್ಲ. ಆದರೆ ಪ್ರೌಢಶಿಕ್ಷಣ ಮಟ್ಟದಲ್ಲಿ ಕಂಪ್ಯೂಟರ್ ಶಿಕ್ಷಣವನ್ನು ನೀಡುತ್ತಿದೆ. ಈ ಶಾಲೆಗಳಿಗೆ ಸರ್ಕಾರವು ನೇರವಾಗಿ ಅನುದಾನವನ್ನು ಬಿಡುಗಡೆ ಮಾಡುತ್ತಿರುವುದಿಲ್ಲ.

ಈ) ಇಲ್ಲ.

ಪ್ರಶ್ನೆ ಉದ್ಭವಿಸುವುದಿಲ್ಲ.

ಬಿಜಾಪುರ ಜಿಲ್ಲೆಯಲ್ಲಿರುವ ಗೌರವ ಶಿಕ್ಷಕರನ್ನು ಖಾಯಂಗೊಳಿಸುವುದು

1914 (2211) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಬಿಜಾಪುರ ಜಿಲ್ಲೆಯಲ್ಲಿ ಇರುವ ಗೌರವ ಶಿಕ್ಷಕರ ಒಟ್ಟು ಸಂಖ್ಯೆ ಎಷ್ಟು;

ಆ) ಈ ಗೌರವ ಶಿಕ್ಷಕರನ್ನು ಖಾಯಂ ಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?